1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 74/2020

ಚಾಸಾ: 6 ಪ್ರಾಸಾ:3

ದಿನಾಂಕ: 23.12.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಡಾ. ಕುಸುಮಾಕರ ಶೆಟ್ಟಿ |
| ತಂದೆಯ ಹೆಸರು | : | ಗೋವಿಂದ ಶೆಟ್ಟಿ |
| ವಯಸ್ಸು | : | 52 ವರ್ಷ |
| ಉದ್ಯೋಗ | : | ವೈದ್ಯಾಧಿಕಾರಿ |
| ವಾಸ ಸ್ಥಳ | : | ತೆಕ್ಕಟ್ಟೆ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನಾನು ಕಳೆದ 27 ವರ್ಷಗಳಿಂದ ಖಾಸಗಿ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿ: 20-07-2019 ರಂದು ರಾತ್ರಿ 9-30 ಗಂಟೆಗೆ ಪ್ರಾಸಾ-2ರವರು ಹಲ್ಲೆಯ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ದಾಖಲಾಗಿದ್ದು, ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತದೆ.

1. ಬಲಕೈಯ ತೋರು ಬೆರಳು ಹಾಗೂ ಉಂಗುರ ಬೆರಳಿನಲ್ಲಿ ಜಜ್ಜಿದ ಗಾಯ ಕಂಡು ಬಂದಿರುತ್ತದೆ.

ನನ್ನ ಅಭಿಪ್ರಾಯದಲ್ಲಿ ಮೇಲಿನ ಗಾಯಗಳು ಸಾಮಾನ್ಯ ಸ್ವರೂಪದ್ದಾಗಿದ್ದು ಈ ಕುರಿತು ನಾನು ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ಸದ್ರಿ ದಾಖಲೆಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-5 ಎಂದು, ಸಾಕ್ಷಿ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿತರ ಪರ ವಕೀಲರಾದ ಶ್ರೀ ಜಿ ಕೆ ಡಿ ರವರಿಂದ:**

ಗಟ್ಟಿಯಾದ ನೆಲದ ಮೇಲೆ ಕೈ ಊರಿ ಬಿದ್ದಾಗ ಸದ್ರಿ ಗಾಯಗಳು ಆಗುವ ಸಾಧ್ಯತೆ ಇದೆ ಎಂದರೆ ಸರಿ. ಪೊಲೀಸರ ಕೋರಿಕೆ ಮೇರೆಗೆ ಚಾಸಾ-2 ರವರನ್ನು ಪರಿಶೀಲಿಸದೆ ನಿಪಿ-5ನ್ನು ವಿತರಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**